**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಶಿ.ವ.ಕೋಶ.ಸಾ.ವ/01/2020-21 ದಿನಾಂಕ:18/11/2020

**ತಿದ್ದುಪಡಿ ಜ್ಞಾಪನ**

**ವಿಷಯ:** 2020-21ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಒಳಗೊಂಡಂತೆ ಪ್ರಾಥಮಿಕ ಶಾಲಾ ಶಿಕ್ಷಕರು ಮತ್ತು ಪ್ರೌಢ ಶಾಲಾ ಶಿಕ್ಷಕರು/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢ ಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಗಳನ್ನು ಕಡ್ಡಾಯವಾಗಿ ಗಣಕೀಕೃತ ಕೌನ್ಸೆಲಿಂಗ್ ಮೂಲಕ ನಡೆಸುವ ಬಗ್ಗೆ.

**ಉಲ್ಲೇಖ:** ಈ ಕಛೇರಿ ಅಧಿಕೃತ ಜ್ಞಾಪನ ಸಮ ಸಂಖ್ಯೆ ದಿನಾಂಕ.11.11.2020

******

2020-21ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಒಳಗೊಂಡಂತೆ ಪ್ರಾಥಮಿಕ ಶಾಲಾ ಶಿಕ್ಷಕರು ಮತ್ತು ಪ್ರೌಢ ಶಾಲಾ ಶಿಕ್ಷಕರು/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢ ಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಗಳನ್ನು ಕಡ್ಡಾಯವಾಗಿ ಗಣಕೀಕೃತ ಕೌನ್ಸೆಲಿಂಗ್ ಮೂಲಕ ನಡೆಸುವ ಬಗ್ಗೆ ಉಲ್ಲೇಖಿತ ಜ್ಞಾಪನ ಪತ್ರದಲ್ಲಿ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ.

(1) ಸದರಿ ಜ್ಞಾಪನ ಪತ್ರದಲ್ಲಿ ಪುಟ ಸಂಖ್ಯೆ 05 ರಲ್ಲಿ ಆದ್ಯತೆಗಳ ವಿವರ ಮತ್ತು ಸಲ್ಲಿಸಬೇಕಾದ ಪ್ರಮಾಣ ಪತ್ರಗಳ ಬಗ್ಗೆ ಕ್ರಮ ಸಂಖ್ಯೆ 05 ರಲ್ಲಿ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಥವಾ ಅನುದಾನಿತ ಶಿಕ್ಷಣ ಸಂಸ್ಥೆಯ ನೌಕರರನ್ನು ವಿವಾಹವಾಗಿರುವ ಶಿಕ್ಷಕರ ಅಥವಾ ಶಿಕ್ಷಕಿ ರವರು ತಾವು ಕರ್ತವ್ಯ ನಿರ್ವಹಿಸುತ್ತಿರುವ ನೇಮಕಾತಿ ಪ್ರಾಧಿಕಾರದಿಂದ ಸೇವಾ ಪ್ರಮಾಣ ಪತ್ರ ಪಡೆಯಲು ಸೂಚಿಸಲಾಗಿದೆ.

- **ವರ್ಗಾವಣೆ ಅಧಿನಿಯಮ 2020 ರಲ್ಲಿ ನೇಮಕಾತಿ ಪ್ರಾಧಿಕಾರದಿಂದ ಸೇವಾ ಪ್ರಮಾಣ ಪತ್ರ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.**
- **ಪ್ರಸ್ತುತ ಕೋವಿಡ್-19 ರ ಪ್ರಯುಕ್ತ, ಸೇವಾ ಪ್ರಮಾಣ ಪತ್ರವನ್ನು ಪಡೆಯಲು ರಾಜ್ಯ ಕಛೇರಿಗಳಿಗೆ ಭೇಟಿ ನೀಡುವುದನ್ನು ತಪ್ಪಿಸುವ ಸಲುವಾಗಿ ಶಿಕ್ಷಕರು ಹಾಗೂ ಅವರ ಪತಿ/ಪತ್ನಿ ರವರುಗಳು ಆಯಾ ಜಿಲ್ಲಾ ಮಟ್ಟದ ಮುಖ್ಯಸ್ಥರಿಂದ ಸೇವಾ ಪ್ರಮಾಣ ಪತ್ರ ಪಡೆಯಲು ತಿಳಿಸಿದೆ. ಈ ಪ್ರಕ್ರಿಯೆ ಪ್ರಸ್ತುತ ಸಾಲಿನ ವರ್ಗಾವಣೆಗೆ ಮಾತ್ರ ಸೀಮಿತವಾಗಿರುತ್ತದೆ.**
- **ಈ ರೀತಿ ಜಿಲ್ಲಾ ಮಟ್ಟದ ಮುಖ್ಯಸ್ಥರಿಂದ ಸೇವಾ ದೃಢೀಕರಣ ಪತ್ರವನ್ನು ನೀಡುವಾಗ ಶಿಕ್ಷಕರ ಹಾಗೂ ಅವರ ಪತಿ/ಪತ್ನಿ ರವರುಗಳ ಸೇವಾ ಧೃಡೀಕರಣ ವಿವರಗಳಲ್ಲಿ ಯಾವುದೇ ಲೋಪದೋಷಗಳಾದಲ್ಲಿ ಸಂಬಂಧಿಸಿದ ಜಿಲ್ಲಾ ಮಟ್ಟದ ಮುಖ್ಯಸ್ಥರು ಮತ್ತು ಸಂಬಂಧಿಸಿದ ಶಿಕ್ಷಕರು ಹಾಗೂ ಅವರ ಪತಿ/ಪತ್ನಿ ರವರುಗಳೇ ನೇರ ಹೊಣೆಗಾರರಾಗಿರುತ್ತಾರೆ.**

(2) ಪುಟ ಸಂಖ್ಯೆ 07 ರ ಕಂಡಿಕೆ 09 ಪ್ರಸ್ತುತ ವೃಂದದಲ್ಲಿ ಸಲ್ಲಿಸಿರುವ ಶಿಕ್ಷಕರ ಎಲ್ಲಾ ಶಾಲೆಗಳ ಸೇವಾ ವಿವರ ಹಾಗೂ ಕಂಡಿಕೆ 09(ಸಿ) ನಲ್ಲಿ ಪ್ರಸ್ತುತ ವೃಂದದಲ್ಲಿನ ಎಲ್ಲಾ ಸ್ಥಳಗಳಲ್ಲಿ ಸಲ್ಲಿಸಿರುವ ಸೇವೆ ಎಂದಿರುವುದನ್ನು **"ಎಲ್ಲಾ ಶಿಕ್ಷಕರುಗಳು ಪ್ರಸ್ತುತ ವೃಂದದವರೆಗಿನ ಎಲ್ಲಾ ವೃಂದದ ಸೇವೆಯನ್ನು"** ಎಂದು ಓದಿಕೊಳ್ಳತಕ್ಕದ್ದು.

**ಆಯುಕ್ತರು**
**ಸಾರ್ವಜನಿಕ ಶಿಕ್ಷಣ ಇಲಾಖೆ**

**ಇವರಿಗೆ, ಅಗತ್ಯ ಕ್ರಮಕ್ಕಾಗಿ**

1. ಸಹ ನಿರ್ದೇಶಕರು, ಬೆಂಗಳೂರು/ಮೈಸೂರು/ಅಪರ ಆಯುಕ್ತರ ಕಛೇರಿ ಕಲ್ಬುರ್ಗಿ/ಧಾರವಾಡ
2. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ಮೈಸೂರು /ಬೆಳಗಾವಿ/ಕಲಬುರಗಿ
3. ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)
4. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು[ಆಡಳಿತ] ರವರ ಮೂಲಕ)

[ಪುಟ...2ಕ್ಕೆ]

**ಪ್ರತಿಯನ್ನು:-**

1. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ರವರ ಆದ್ಯ ಅವಗಾಹನೆಗಾಗಿ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ .
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಜಂಟಿ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
7. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರುಗಿ/ಧಾರವಾಡ
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ರವರುಗಳಿಗೆ.
9. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು ರವರಿಗೆ.
10. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು-01 ರವರಿಗೆ ಪ್ರತಿಯನ್ನು ರವಾನಿಸುತ್ತಾ, ಉದ್ದೇಶಿತ ವರ್ಗಾವಣೆ ಪ್ರಕ್ರಿಯೆಗೆ "ತಂತ್ರಾಂಶವನ್ನು" ನಿಯಮಗಳಡಿ ಸಜ್ಜುಗೊಳಿಸಿ ಯಾವುದೇ ಲೋಪಗಳು ಉದ್ಭವಿಸದಂತೆ, ಸೂಕ್ತ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.
11. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
12. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ
13. ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಣೆಗಾಗಿ ಇ-ಆಡಳಿತ ಶಾಖೆಗೆ. 14.ಕಛೇರಿ ಪ್ರತಿ.